ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಕಾರ್ಮಿಕ ವಿಮಾ ಯೋಜನೆಗಳ ಸೌಲಭ್ಯಗಳು

ಶ್ರೀ ಸುನೀಲ್ ವಲ್ಯಾಪುರ್ (ವಿಧಾನ ಸಭೆಯಿಂದ ಚುನಾಯಿತರಾದವರು ):-

867 (943) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಸೇರಿದಂತೆ ರಾಜ್ಯ ಮಹಾನಗರ ಪ್ರದೇಶಗಳಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕ ವರ್ಗದವರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಆರೋಗ್ಯ ವಿಮಾ ಯೋಜನೆಗಳ ನೀಡಿಕೆ ಕುರಿತಾದ ವಿವರಗಳೇನು ;

(ಆ) ಕಳೆದ 2 ವರ್ಷಗಳಲ್ಲಿ ಎಷ್ಟು ಜನ ಕಾರ್ಮಿಕ ಫಲಾನುಭವಿಗಳಿಗೆ ಆರೋಗ್ಯ ವಿಮಾ ಸೌಲಭ್ಯವನ್ನು ಒದಗಿಸಲಾಗಿದೆ ;

(ಇ) ವಲಸೆ ಬಂದ ಕಾರ್ಮಿಕ ಶ್ರಮಜೀವಿಗಳಿಗೆ ಸದರಿ ಇಲಾಖೆಯವರು ಒದಗಿಸಿಕೊಡುತ್ತಿರುವ ಸೌಲಭ್ಯಗಳು ಯಾವುವು ;

(ಈ) ಕಳೆದ 2 ವರ್ಷಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಬಂದ ಅನುದಾನಗಳ ವಿವರಗಳೇನು; ಅವುಗಳನ್ನು ಪೂರ್ಣ ಪ್ರಮಾಣದಲ್ಲಿ ಬಳಸಿಕೊಳ್ಳಲಾಗಿದೆಯೇ; (ವಿವರ ಒದಗಿಸುವುದು)

(ಉ) ಕಲಬುರಗಿ ಜಿಲ್ಲೆಯ ಸಿಮೆಂಟ್ ಫ್ಯಾಕ್ಟರಿಗಳಲ್ಲಿ ಸಂಘಟಿತ/ಅಸಂಘಟಿತ ಕಾರ್ಮಿಕರಿಗೆ ಒದಗಿಸಿ ಕೊಡುವ ಸೌಲಭ್ಯಗಳು ಯಾವುವು ?